ಕರ್ನಾಟಕ ರಾಜ್ಯದಲ್ಲಿ ಒಟ್ಟು ಅಂದಾಜು 22 ಲಕ್ಷ ಮನೆಗಳು ವಿದ್ಯುದ್ದೀಕರಣ ಹೊಂದಿಲ್ಲದೆ ಇರುತ್ತವೆ.

ಮೇಲೆ ತಿಳಿಸಿದ ವಿವರಗಳಲ್ಲಿ ಮೈಸೂರು ಚಾಮರಾಜನಗರ ಮತ್ತು ಉತ್ತರ ಕನ್ನಡ ಜಿಲ್ಲೆಯ 18 ಗ್ರಾಮಗಳು ಮತ್ತು ಉತ್ತರ ಕನ್ನಡ ಜಿಲ್ಲೆಯ 8 ಮಜಿರೆಗಳನ್ನು ಸೌರಶಕ್ತಿಯಿಂದ ವಿದ್ಯುದ್ದೀಕರಣಗೊಳಿಸಲು ಅಸಂಪ್ರದಾಯಿಕ ಇಂಧನಮೂಲಗಳ ಮಂತ್ರಾಲಯ ನವದೆಹಲಿ, ಇವರಿಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ. ಅವರಿಂದ ಅನುಮತಿ ಬಂದ ಕೂಡಲೇ ಈ ಕಾರ್ಯವನ್ನು 2004–05ನೇ ಸಾಲಿನಲ್ಲಿಯೇ ತೆಗೆದುಕೊಳ್ಳಲಾಗುವುದು.

707(97) : ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಂದಾಯ ಭೂಮಿ ಕಾಯ್ದೆಗೆ ತಿದ್ದುಪಡಿ ತರಲು ಸರ್ಕಾರ ಚಿಂತಿಸುತ್ತಿದೆಯೇ; ತಿದ್ದುಪಡಿ ತರಲು ಕಾರಣಗಳೇನು;

ಆ) ಯಾವ ಯಾವ ವಿಚಾರಗಳಿಗೆ ಸಂಬಂಧಪಟ್ಟಂತೆ ತಿದ್ದುಪಡಿ ತರಲಾಗುವುದು;

ಇ) ಈ ರೀತಿ ತಿದ್ದುಪಡಿ ಮಾಡುವುದರಿಂದ ರೈತರು ಈಗಾಗಲೇ ಸಾಗುವಳಿ ಮಾಡುತ್ತಿರುವ ಭೂಮಿಯನ್ನು ಸರ್ಕಾರ ವಶಪಡಿಸಿಕೊಳ್ಳಬಹುದೆ;

ಈ) ಇದರಿಂದ ರೈತರಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ?

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು)

ಅ) ಇಲ್ಲ. ಉದ್ಭವಿಸುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

708(99) ಶ್ರೀ ಬಸವರಾಜು ಎ.ಎಸ್. (ಅರಸೀಕೆರೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮುಜರಾಯಿ ಕಾನೂನಿಗೆ ತಿದ್ದುಪಡಿ ತರಲು ಸರ್ಕಾರ ನಿರ್ಧರಿಸಿದೆಯೇ; ತಿದ್ದುಪಡಿಗೆ ಕಾರಣಗಳೇನು;

ಆ) ಯಾವ ವಿಚಾರಕ್ಕೆ ಸಂಬಂಧಪಟ್ಟಂತೆ ತಿದ್ದುಪಡಿ ತರಲಾಗುವುದು;

ಇ) ಹಾಲಿ ಇರುವ ಕಾನೂನಿನ ಚೌಕಟ್ಟಿನೊಳಗೆ ಬಡ ದೇವಸ್ಥಾನಗಳನ್ನು ಅಭಿವೃದ್ಧಿಗೊಳಿಸಲು ಸಾಧ್ಯವಿಲ್ಲವೇ;

ಈ) ಈ ಬಗ್ಗೆ ಸರ್ಕಾರದ ನಿಲುವೇನು?

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು)

ಅ) ಪರಿಶೀಲನೆಯಲ್ಲಿರುತ್ತದೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997ನ್ನು ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಉಂಟಾಗಿರುವ ತೊಂದರೆಗಳನ್ನು ನಿವಾರಿಸುವ ದೃಷ್ಟಿಯಿಂದ ತಿದ್ದುಪಡಿ ತರಲು ಉದ್ದೇಶಿಸಿದೆ;